# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 536 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 14.08.2025 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ರಾಜ್ಯದಲ್ಲಿ ದಿನೇ ದಿನೇ ಮಾದಕ ವಸ್ತುಗಳ ಬಳಕೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಮಾದಕ ವಸ್ತುಗಳ ಬಳಕೆ ಕುರಿತಂತೆ ಎನ್.ಡಿ.ಪಿ.ಎಸ್ ಕಾಯ್ದೆ-1985ರ ಅಡಿಯಲ್ಲಿ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ)ಬಂದಿದಲ್ಲಿ, ಮಾದಕ ವಸ್ತುಗಳ ಬಳಕೆ, ಕಳ್ಳಸಾಗಾಣಿಕೆ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳೇನು; | **ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟವನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಈ ಕೆಳಕಂಡಂತಿದೆ:**<br>➢ ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/141/ಪಿಓಪಿ/2025, ದಿನಾಂಕ: 01/08/2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ **(Anti Narcotic Task Force)** ಘಟಕವನ್ನು ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಧೀಕ್ಷಕರು ಮತ್ತು ಲಿಪಿಕ ಅಧಿಕಾರಿ/ಸಿಬ್ಬಂದಿಗನ್ನೊಳಗೊಂಡ 10 ಹುದ್ದೆಗಳೊಂದಿಗೆ ಸೃಜಿಸಲು ಮತ್ತು ಸದರಿ ಘಟಕಕ್ಕೆ ಅವಶ್ಯವಿರುವ ಒಟ್ಟು 56 ಹುದ್ದೆಗಳನ್ನು ನಕ್ಸಲ್ ನಿಗ್ರಹ ಪಡೆ **(Anti Naxal Force)** ಘಟಕದಿಂದ ವರ್ಗಾಯಿಸಲು ಹಾಗೂ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotic Task Force) ಘಟಕವು ಒಟ್ಟಾರೆಯಾಗಿ ಡಿಜಿ ಮತ್ತು ಐಜಿಪಿರವರ ಅಧೀನದಲ್ಲಿ ಕಾರ್ಯನಿರ್ವಹಿಸುವಂತೆ ಮತ್ತು ಡಿ.ಜಿ., ಸೈಬರ್ ಕಮಾಂಡ್‌ರವರಿಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಆದೇಶಿಸಲಾಗಿರುತ್ತದೆ.<br>➢ ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಾಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಗೆ ಸಹ ಪರಿಚಯಿಸಲಾಗಿದೆ.<br>➢ ಮಾದಕವಸ್ತು ಸಂಬಂಧಿತ ಪ್ರಕರಣಗಳಲ್ಲಿ ರಾಜ್ಯ ಪೊಲೀಸರ ತನಿಖಾ ಸಾಮರ್ಥ್ಯಗಳನ್ನು ಹೆಚ್ಚಿಸಲು NCB ಮತ್ತು ಇತರ ಏಜೆನ್ಸಿಗಳ ಸಹಯೋಗದೊಂದಿಗೆ ಆರು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಉಪ ಅಧೀಕ್ಷಕರವರಿಗೆ (ಡಿವೈಎಸ್ಪಿ), ಪೊಲೀಸ್ ನಿರೀಕ್ಷಕರು ಮತ್ತು ಅಬಕಾರಿ ಅಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತಷ್ಟು ಸಾಮರ್ಥ್ಯ |

ನಿರ್ಮಾಣ ಕಾರ್ಯಾಗಾರಗಳನ್ನು ಯೋಜಿಸಲಾಗಿದೆ.

- ತರಬೇತಿ ಕಾರ್ಯಕ್ರಮಗಳು:- ಸಿಐಡಿ ಅಧಿಕಾರಿಗಳನ್ನು ಭೋಪಾಲ್ ನಲ್ಲಿರುವ ಸೆಂಟ್ರಲ್ ಅಕಾಡೆಮಿ ಫಾರ್ ಪೊಲೀಸ್ ಟ್ರೈನಿಂಗ್ (ಸಿಎಪಿಟಿ) ತರಬೇತುದಾರರಿಗಾಗಿ ತರಬೇತಿ (TOT) ಹಾಗೂ ಮಾದಕ ದ್ರವ್ಯ ತನಿಖೆಯ ಮೇಲೆ ಕೇಂದ್ರೀಕರಿಸಿದ ಕಾರ್ಯಕ್ರಮಗಳಿಗೆ ಕಳುಹಿಸಲಾಗಿದೆ. NDPS ಕಾಯ್ದೆ (Narcotic Drugs and Psychotropic Substances Act-1985) ಕುರಿತು ಇತರ ಸಿಬ್ಬಂದಿಗೆ ಪೊಲೀಸ್ ತರಬೇತಿ ಶಾಲೆಗಳಲ್ಲಿ ಇದೇ ರೀತಿಯ ತರಬೇತಿಯನ್ನು ನೀಡಲಾಗುತ್ತಿದೆ.
- ಮಾದಕ ದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.
- NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ- National Integrated Database on Arrested Narco Offenders - NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.
- ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾ ವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.
- ದಿನಾಂಕ: 10.06.2025 ರಂದು ಸಿ.ಸಿ.ಬಿ ಪೊಲೀಸರು ಚಿಕ್ಕಜಾಲ ಠಾಣಾ ವ್ಯಾಪ್ತಿಯಲ್ಲಿ ನೈಜೀರಿಯ ದೇಶದ ಪ್ರಜೆಯನ್ನು ಬಂಧಿಸಿ ಸುಮಾರು 10.00ಕೋಟಿ ಮೌಲ್ಯದ ಬೆಲೆ ಬಾಳುವ ಸೂಮಾರು 5.325 ಕೆ.ಜಿ ತೂಕದ ಮಾದಕ ವಸ್ತು ಎಂ.ಡಿ.ಎಂ.ಎ ಅನ್ನು ವಶಪಡಿಸಿಕೊಳ್ಳಲಾಗಿದೆ.
- ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿNCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.
- PITNDPS-1988ರ ಕಾಯ್ದೆರನ್ವಯ ರಾಜ್ಯದಲ್ಲಿ ಇದುವರೆವಿಗೂ 19 ಆರೋಪಿಗಳ ವಿರುದ್ಧ ನಿಯಾಮಾನುಸಾರ ಬಂಧನ ಕ್ರಮ ಜರುಗಿಸಿ ಮಾನ್ಯ PITNDPS ಸಲಹಾ ಮಂಡಳಿಯ ಮುಂದೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಮಾನ್ಯ ಸಲಹಾ ಮಂಡಳಿಯ ವರದಿಯನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಜೂನ್ 26, 2025 ರಂದು "ಡ್ರಗ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರಿಯ ದಿನಾಚರಣೆ" ಅಂಗವಾಗಿ ಸುಮಾರು 4000 ಶಾಲಾ-ಕಾಲೇಜು ವಿಧ್ಯಾರ್ಥಿಗಳಿಗೆ ತರಬೇತಿ

<table>
<tr>
<td></td>
<td>ಕಾರ್ಯಗಾರ ಆಯೋಜಿಸಿ ತಿಳುವಳಿಕೆ ನೀಡಲಾಗಿದೆ.<br><br>➢ Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸರ್ವಾಜನಿಕರಲ್ಲಿ ಹಾಗೂ ವಿಧ್ಯಾರ್ಥಿಗಳಲ್ಲಿ ಅರಿವು ಮೂಡಿಸಿ ಮಾದಕವಸ್ತು ಬಳಕೆ, ಸಂಗ್ರಹಣೆ ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ. ಸದರಿ App ಮುಖಾಂತರ ಸಾರ್ವಜನಿಕರು ನೇರವಾಗಿ ಪೊಲೀಸರಿಗೆ ಮಾಹಿತಿ ನೀಡಬಹುದಾಗಿರುತ್ತದೆ.</td>
</tr>
<tr>
<td>ಇ) ರಾಜ್ಯದಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಎಷ್ಟು ಆರೋಪಿಗಳನ್ನು ಬಂಧಿಸಿ ಶಿಕ್ಷೆಗೆ ಗುರಿಪಡಿಸಲಾಗಿದೆ?</td>
<td>ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟ, ಸಾಗಾಣಿಕೆ ಕುರಿತಂತೆ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳು ಹಾಗೂ ಬಂಧಿಸಲಾಗಿರುವ ಆರೋಪಿಗಳ ವಿವರಗಳು ಈ ಕೆಳಕಂಡಂತಿದೆ:
<table>
<tr><th>ವರ್ಷ</th><th>ದಾಖಲಾದ ಪ್ರಕರಣಗಳ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳ ಸಂಖ್ಯೆ</th><th>ಶಿಕ್ಷೆ ಪ್ರಕರಣಗಳ ಸಂಖ್ಯೆ</th></tr>
<tr><td>2023</td><td>6767</td><td>6337</td><td>3275</td></tr>
<tr><td>2024</td><td>4188</td><td>3293</td><td>1577</td></tr>
<tr><td>2025 (ಜುಲೈ)</td><td>3530</td><td>1435</td><td>452</td></tr>
</table>
</td>
</tr>
</table>

ಒಇ 41 ಪಿಎನ್‌ಡಿ 2025 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು